<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.,ರವರ ನ್ಯಾಯಾಲಯ, ಕಡೂರು</u>

ಓ.ಎಸ್.ನಂ.19/2023

ದಿನಾಂಕಃ09.11.2023 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಪಿ.ಡಬ್ಲ್ಯುಃ2

**<u>ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಎಂ.ಎಸ್.ಎಲ್. ವಕೀಲರಿಂದಃ-</u>**

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ಮೂಲಕ ಸಲ್ಲಿಸುತ್ತಿದ್ದೇನೆ. ಅದನ್ನು ಓದಿ, ತಿಳಿದು, ಸಹಿ ಮಾಡಿರುತ್ತೇನೆ. ಅದರಲ್ಲಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ.

2016 ರಲ್ಲಿ ಮಹದೇವಪ್ಪ ರವರು ನಿಂಗಪ್ಪರವರಿಗೆ ವಿಲ್ ಬರೆದಿರುತ್ತಾರೆ. ಮಹದೇವಪ್ಪ ರವರು ವಿಲ್ ಗೆ ಸಹಿ ಮಾಡಲು ನನ್ನನ್ನು ಮತ್ತು ಜಯಣ್ಣ ರವರನ್ನು ಕರೆದಿದ್ದರು. ಸದರಿ ವಿಲ್ ಗೆ ನಾನು ಸಹಿ ಮಾಡಿರುತ್ತೇನೆ. ಸಾಕ್ಷಿಯು ದಿಃ28.04.2016 ರಂದು ಆದ ನೊಂದಾಯಿತ ಮರಣ ಶಾಸನ ಪತ್ರವನ್ನು ನೋಡಿ, ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-8 ಎಂದು, ಸಹಿಯನ್ನು ನಿಪಿ-8(ಎ) ಎಂದು ಗುರುತಿಸಲಾಯಿತು. ನಾನು ಸಹಿ ಮಾಡಿದ ನಂತರ ಜಯಣ್ಣ ರವರು ಸಹಿ ಮಾಡಿದರು. ಮಹದೇವಪ್ಪ ರವರು ನನ್ನ ಸಮಕ್ಷಮ ನಿಪಿ-8 ಕ್ಕೆ ತಮ್ಮ ಹೆಬ್ಬೆಟ್ಟಿನ ಗುರುತನ್ನು ಹಾಕಿರುತ್ತಾರೆ.

**(ಪ್ರತಿವಾದಿಗಳು ಪ್ರತಿವಾದ ಪತ್ರವನ್ನು ಸಲ್ಲಿಸದೇ ಇರುವ ಕಾರಣ ಪಾಟೀ ಸವಾಲನ್ನು ಇಲ್ಲ ಎಂದು ಪರಿಗಣಿಸಲಾಯಿತು.)**

**(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

ಓ.ಹೇ.ಕೇ.ಸ.ಇ.ಎ.ಒ.

ಸಹಿ/-

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು, ಕಡೂರು..,ರವರು,
ಕಡೂರು.